67

<u>**ಮಾನ್ಯ ವಿಧಾನ ಸಭೆಯ ಪರಿಷತ್ತು ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ಇವರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**</u>

<u>ಪ್ರಶ್ನೆ:</u>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿದೆ ಎನ್ನಲಾದ ಖಾಸಗಿ ಜಾಗಗಳಲ್ಲಿ ಬಡಾವಣೆಗಳ ನಿರ್ಮಾಣ, ನಿವೇಶನ ಹಂಚಿಕೆ, ಭೂಮಾಲೀಕರಿಗೆ ನೀಡಿರುವ ಪರಿಹಾರ ಇತ್ಯಾದಿಗಳಲ್ಲಿ ನಡೆದಿರುವ ಕಾನೂನು ಬಾಹಿರ ಕೃತ್ಯಗಳ ಬಗ್ಗೆ.

**ಉತ್ತರ:**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿನ ಹಲವು ವಿಷಯಗಳ ಬಗ್ಗೆ ಸರ್ಕಾರದಲ್ಲಿ ಸ್ವೀಕೃತವಾಗಿರುವ ದೂರು /ಮನವಿ / ಕೋರಿಕೆಗಳ ತನಿಖೆಯನ್ನು ನಡೆಸಿ ವರದಿಯನ್ನು ನೀಡಲು ಸರ್ಕಾರದ ಆದೇಶ ಸಂಖ್ಯೆ: ನಅಇ 308 ಮೈಅಪ್ರಾ 2021, ದಿನಾಂಕ:02.07.2022, ತಿದ್ದುಪಡಿ ದಿನಾಂಕ:11.08.2022 ಮತ್ತು ದಿನಾಂಕ: 25.08.2022 ರಲ್ಲಿ ತಾಂತ್ರಿಕ ಸಮಿತಿಯನ್ನು ರಚಿಸಲಾಗಿದೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ತುಂಡು ಭೂಮಿ ಹಂಚಿಕೆ, ಭೂ ಪರಿಹಾರವಾಗಿ ಜಾಗ ನೀಡುವ ಕುರಿತು ದಿನಾಂಕ:14.03.2023ರ ನಿರ್ದೇಶನಗಳನ್ನು ಉಲ್ಲಂಘನೆಯಾಗಿರುವ ಪ್ರಕರಣಗಳಲ್ಲಿ ತನಿಖೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ: ನಅಇ 267 ಮೈಅಪ್ರಾ 2023(ಇ) ದಿನಾಂಕ:04.12.2023ರಲ್ಲಿ ಶ್ರೀ ಪ್ರಭುಲಿಂಗ ಕವಳಿಕಟ್ಟೆ ಭಾ.ಆ.ಸೇ, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಅಧ್ಯಕ್ಷತೆಯಲ್ಲಿ ತನಿಖಾ ಸಮಿತಿಯನ್ನು ರಚಿಸಲಾಗಿದೆ. ಮೇಲ್ಕಂಡ ಸಮಿತಿಗಳು ಸರ್ಕಾರಕ್ಕೆ ತನಿಖಾ ವರದಿಯನ್ನು ಸಲ್ಲಿಸಿದ್ದು ಪರಿಶೀಲನೆಯಲ್ಲಿರುತ್ತದೆ.

ಪ್ರಸ್ತುತ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ಹಗರಣದ ಬಗ್ಗೆ ಪತ್ರಿಕೆಗಳಲ್ಲಿ ಸುದ್ದಿ ಪ್ರಕಟಣೆಯಾಗಿರುವ ಹಿನ್ನಲೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕಾಯ್ದೆ/ ನಿಯಮ / ವಲಯನಿಯಮಾವಳಿ / ಸರ್ಕಾರದ ಆದೇಶ / ಸರ್ಕಾರದ ಸುತ್ತೋಲೆಗಳನ್ವಯ ಸೂಚನೆಗಳನ್ನು ಪಾಲಿಸದೇ ಅವ್ಯವಹಾರ ಮತ್ತು ಕರ್ತವ್ಯಲೋಪವೆಸಗಿರುವ ಪ್ರಕರಣಗಳ ಬಗ್ಗೆ ಕೂಲಂಕುಷವಾಗಿ ತನಿಖೆ ನಡೆಸಿ ಸಮಗ್ರವಾದ ವರದಿ ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ: ನಅಇ 211 ಮೈಅಪ್ರಾ 2024, ದಿನಾಂಕ:01.07.2024 ಹಾಗೂ 03.07.2024 ರಲ್ಲಿ ಸಮಿತಿ ರಚಿಸಿ ಆದೇಶಿಸಲಾಗಿದೆ. ಸದರಿ ತನಿಖಾ ಸಮಿತಿಯು ನೀಡುವ ತನಿಖಾ ವರದಿಯನ್ನು ಆಧರಿಸಿ ಕರ್ತವ್ಯಲೋಪವೆಸಗಿರುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲು ಕ್ರಮ ವಹಿಸಲಾಗುವುದು.

**ಸಂಖ್ಯೆ: ನಅಇ 245 ಮೈಅಪ್ರಾ 2024**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು